ಪ್ರಕಟಣೆ

ಅಧ್ಯಕ್ಷರು.—ವಿಧಾನ ಪರಿಷತ್ತಿನ ಸಭಾಪತಿಯವರಿಂದ ಈ ಕೆಳಕಂಡ ಸಂದೇಶ ಬಂದಿದೆ.

"ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆ ಮತ್ತು ೧೧ಜೆನೇ ನಿಯಮದ ಮೇರೆಗೆ ದಿನಾಂಕ ೧೨ನೇ ಮಾರ್ಚ್ ೧೯೮೭ರಂದು ವಿಧಾನ ಪರಿಷತ್ತಿನಲ್ಲಿ ತಿದ್ದುಪಡಿಗಳೊಂದಿಗೆ ಅಂಗೀಕಾರವಾದ ೧೯೮೭ನೇ ಇಸವಿಯ ಕರ್ನಾಟಕ ಸ್ಥಳೀಯ ಪ್ರಾಧಿಕಾರಗಳು (ಪಕ್ಷಾಂತರ ನಿಷೇಧ) ವಿಧೇಯಕವನ್ನು ವಿಧಾನಸಭೆಯ ಅನುಮೋದನೆಗಾಗಿ ಕಳುಹಿಸುತ್ತಿದ್ದೇನೆ."

ವಿತ್ತೀಯ ಕಾರ್ಯಕಲಾಪಗಳು

೧೯೮೭-೮೮ನೇ ಸಾಲಿನ ಬೇಡಿಕೆಗಳ ಮಂಡನೆ ಮತ್ತು ಚರ್ಚೆ

ಅಭಿಯಾಚನೆ ಕ್ರಮಾಂಕ ೨೧–ಆಹಾರ ಮತ್ತು ನಿತ್ಯೋಪಯೋಗಿ ಸಾಮಗ್ರಿಗಳ ಸರಬರಾಜು

ಶ್ರೀ ಎ. ಲಕ್ಷ್ಮೀಸಾಗರ್ —ಮಾನ್ಯ ಅಧ್ಯಕ್ಷರೆ, ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ಆಹಾರ ಮತ್ತು ನಿತ್ಯೋಪಯೋಗಿ ಸಾಮಗ್ರಿಗಳ ಸರಬರಾಜುಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ಳಳ,೯೨,೫೨,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೧೧೦ ೦೦ ೮೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡ ಬೇಕೆಂದು ನಾನು ಭಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೩೨– ನಗರಾಭಿವೃದ್ಧಿ ಇತ್ಯಾದಿ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧-೩-೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ನಗರಾಭಿವೃದ್ಧಿ ಇತ್ಯಾದಿಗಳಿಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೧೫. ೭೧, ೮೧, ೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮತ್ತು ಬಂಡವಾಳ ಖಾತೆಯಲ್ಲಿ ೧೪,೨೧ ೦೦ ೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡ ಬೇಕೆಂದು ನಾನು ಭಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕಮಾಂಕ ೩೩–ನಿಗಮ ಮತ್ತು ನಗರ ಪಾಲಿಕೆಗಳಿಗೆ ಪರಿಹಾರ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ನಿಗಮ ಮತ್ತು ನಗರ ಪಾಲಿಕೆಗಳಿಗೆ ಪರಿಹಾರ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೪೭,೨೩,೪೦,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡಬೇಕೆಂದು ನಾನು ಭಿನ್ನವಿಸಿಕೊಳ್ಳುತ್ತೇನೆ.

ಅಭಿಯಾಚನೆ ಕ್ರಮಾಂಕ ೩೬–ರಾಜ್ಯ ವಿಧಾನ ಮಂಡಲ

ರಾಜ್ಯಪಾಲರ ಶಿಫಾರಸ್ಸಿನ ಮೇರೆಗೆ ೩೧–೩–೧೯೮೮ರಂದು ಕೊನೆಗೊಳ್ಳುವ ಆರ್ಥಿಕ ವರ್ಷದಲ್ಲಿ ರಾಜ್ಯ ವಿಧಾನಸಭೆಗೆ ಸಂದಾಯ ಮಾಡುವಲ್ಲಿ ಬರತಕ್ಕಂಥ ವೆಚ್ಚವನ್ನು ವಹಿಸಲು ಸರ್ಕಾರಕ್ಕೆ ರಾಜಸ್ವ ಖಾತೆಯಲ್ಲಿ ೪,೧೫,೫೯,೦೦೦ ರೂಪಾಯಿಗಳಿಗಿಂತ ಮೀರದ ಮೊತ್ತವನ್ನು ಮಂಜೂರ್ಮಾಡಬೇಕೆಂದು ನಾನು ಭಿನ್ನವಿಸಿಕೊಳ್ಳುತ್ತೇನೆ.